ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

5

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಮಂಡಲ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ಉದಯಕಾಲ ದಿನಾಂಕ : DATE : 7/12/20

# ಅಧಿವೇಶನದಲ್ಲಿ ಗೋಹತ್ಯೆ ನಿಷೇಧ ಕಾಯ್ದೆ ಚರ್ಚೆ ಸಾಧ್ಯತೆ

ಬೆಂಗಳೂರು: ಸೋಮವಾರದಿಂದ ರಾಜ್ಯ ವಿಧಾನಮಂಡಲದ ಅಧಿವೇಶನ ಶುರುವಾಗಲಿದ್ದು, ಗೋಹತ್ಯೆ ನಿಷೇಧ ಕಾಯ್ದೆ, ಲವ್ ಜಿಹಾದ್ ಮತ್ತು ರಾಜ್ಯದ ಭೂಸುಧಾರಣಾ ಮಸೂದೆಗಳು ಸದ್ದು ಮಾಡುವ ಸಾಧ್ಯತೆ ಇದೆ.

**ಇಂದಿನಿಂದ ಅಧಿವೇಶನ**

ಅಧಿವೇಶನ ಆರಂಭದ ಮುನ್ನಾದಿನವಾದ ಭಾನುವಾರ ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ ಅವರು ಪರಿಶೀಲನೆ ನಡೆಸಿದರು. ಕೊರೊನಾ ಹಿನ್ನೆಲೆಯಲ್ಲಿ ಕಳೆದ ಬಾರಿಯಂತೆ ಈ ಬಾರಿಯೂ ಶಾಸಕರು ಮತ್ತು ಸಂಬಂಧಪಟ್ಟ ಇಲಾಖೆಯ ಹಿರಿಯ ಅಧಿಕಾರಿಗಳಿಗೆ ಮಾತ್ರ ವಿಧಾನಸಭೆಯ ಒಳಗೆ ಪ್ರವೇಶಕ್ಕೆ ಅವಕಾಶ ನೀಡಲಾಗಿದೆ. ಜತೆಗೆ, ಶಾಸಕರ ನಡುವೆ ಅಂತರ ಕಾಯ್ದುಕೊಳ್ಳಲು ಎರಡು ಆಸನಗಳ ನಡುವೆ ಫೈಬರ್ ವಿಭಜಕಗಳನ್ನು ಅಳವಡಿಸಲಾಗಿದೆ.

ಶಾಸಕರು ವಿಧಾನಸಭೆ ಪ್ರವೇಶಿಸಲು ಸ್ಯಾನಿಟೈಸರ್ ಹಾಗೂ ಥರ್ಮಲ್ ಸ್ಕ್ರೀನಿಂಗ್ ನಡೆಸಲು ಸಿದ್ಧತೆ ಮಾಡಿಕೊಳ್ಳಲಾಗಿದೆ. ಅಲ್ಲದೇ ಕೊರೊನಾ ಟೆಸ್ಟ್ ಮಾಡಿಸಿಕೊಳ್ಳಲು ವಿಧಾನಸೌಧದ ಕೆಳ ಮಹಡಿಯಲ್ಲಿರುವ ಬ್ಯಾಂಕ್ವೆಟ್ ಹಾಲ್‌ನಲ್ಲಿ ಕೋವಿಡ್ ಕೇರ್ ಸೆಂಟರ್ ಆರಂಭಿಸಲಾಗಿದ್ದು, ಅಗತ್ಯವಿದ್ದವರು ತಪಾಸಣೆ ಮಾಡಿಸಿಕೊಳ್ಳಬಹುದು. ಅಧಿವೇಶನದಲ್ಲಿ ಪಾಲ್ಗೊಳ್ಳುವ ಅಧಿಕಾರಿಗಳು ಮತ್ತು ಸಿಬ್ಬಂದಿ ಕೂಡ ಕೋವಿಡ್ ತಪಾಸಣೆ ಮಾಡಿಸಿಕೊಳ್ಳಲು ಸೂಚಿಸಲಾಗಿದೆ.

ಈ ಬಾರಿಯೂ ಸದನದ ಕಲಾಪವನ್ನು ದೂರದರ್ಶನದ ಮೂಲಕ ನೇರ ಪ್ರಸಾರಕ್ಕೆ ಅವಕಾಶ ಕಲ್ಪಿಸಲಾಗಿದ್ದು, ಪ್ರತಿದಿನ ಸದನದ ಆರಂಭದಿಂದ ಮುಕ್ತಾಯದವರೆಗೂ ದೂರದರ್ಶನದಲ್ಲಿ ಕಲಾಪ ನೇರ ಪ್ರಸಾರಕ್ಕೆ ಅವಕಾಶ ಕಲ್ಪಿಸಲಾಗಿದೆ. ಮಾಧ್ಯಮ ಪ್ರತಿನಿಧಿಗಳಿಗೆ ಎರಡನೇ ಮಹಡಿಯ ಸ್ಪೀಕರ್ ಗ್ಯಾಲರಿಯಲ್ಲಿ ಕುಳಿತುಕೊಳ್ಳಲು ಅವಕಾಶ ಕಲ್ಪಿಸಲಾಗಿದೆ ಎಂದು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಲಾಗಿದೆ.